ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯಲ್ಲಿ ಅರಣ್ಯ ಹಕ್ಕು ಕಾಯಿದೆ ಜಾರಿ ಕುರಿತು.

ಶ್ರೀ ಎಸ್. ನಾಗರಾಜ(ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

97 (181) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಅರಣ್ಯ ಹಕ್ಕು ಕಾಯ್ದೆ ಜಾರಿ ಅಡಿಯಲ್ಲಿ ಗಿರಿಜನ ಮತ್ತು ಬುಡಕಟ್ಟು ಜನರಿಂದ ಇದುವರೆಗೆ ಸಲ್ಲಿಕೆಯಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು; ವಿಲೇವಾರಿಯಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು; (ವಿವರ ಒದಗಿಸುವುದು)

(ಆ) ಆದಿವಾಸಿಗಳ ಅರಣ್ಯ ಹಕ್ಕು ಮಾನ್ಯತಾ ಕಾಯ್ದೆಯನ್ನು ಸೂಕ್ತವಾಗಿ ಜಾರಿಗೆ ತರುವ ಮೂಲಕ ಈ ಅರ್ಜಿಗಳನ್ನು ಪರಿಶೀಲಿಸಿ ವಿಲೇವಾರಿ ಮಾಡಲು ಕ್ರಮ ಜರುಗಿಸಲಾಗುವುದೇ ಈ ಬಗ್ಗೆ ಗಿರಿಜನ ಕಲ್ಯಾಣ ಇಲಾಖೆ, ಅರಣ್ಯ ಇಲಾಖೆ ಮತ್ತು ಕಂದಾಯ ಇಲಾಖೆಯ ಉನ್ನತ ಅಧಿಕಾರಿಗಳ ಸಭೆ ಏರ್ಪಡಿಸಿ, ಅರ್ಜಿಗಳ ವಿಲೇವಾರಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?